ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಲ್ಲಿ ಮನೆ ಕಳೆದುಕೊಂಡವರ ಕುರಿತು

ಶ್ರೀಮತಿಎಸ್.ವೀಣಾಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):-

272 (326) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಲ್ಲಿ ಮನೆ ಕಳೆದುಕೊಂಡು ನಿರಾಶ್ರಿತರಾದವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ನಿರಾಶ್ರಿತರಾದವರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರ, ಸಹಾಯಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ನಿರಾಶ್ರಿತರಲ್ಲಿ ಸರ್ಕಾರದಿಂದ ನಿರ್ಮಿಸಿಕೊಡುವ ಮನೆಗಳನ್ನು ಕೋರಿರುವವರ ಸಂಖ್ಯೆ ಎಷ್ಟು ; ಹಾಗೂ ಬೇರೆ ರೀತಿಯ ಪರಿಹಾರ ಕ್ರಮಗಳನ್ನು ಬಯಸಿರುವವರ ಸಂಖ್ಯೆ ಎಷ್ಟು ;

(ಈ) ಎಷ್ಟು ನಿರಾಶ್ರಿತರಿಗೆ ಮನೆ ಹಸ್ತಾಂತರಿಸಲಾಗಿದೆ ; ಎಷ್ಟು ನಿರಾಶ್ರಿತರಿಗೆ ಬೇರೆ ರೀತಿಯ ಪರಿಹಾರ ವ್ಯವಸ್ಥೆ ಕಲ್ಪಿಸಲಾಗಿದೆ?